# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಮಂಡ್ಯ

# ಸಿ.ಸಿ. 1519/2023

| | | | |
|---|---|---|---|
| ಸಾಕ್ಷಿದಾರರ ಹೆಸರು | ಟಿ.ಎಸ್. ಮನು ಕುಮಾರ್ | ಪ್ರಮಾಣ ವಚನ ಬೋಧಿಸಿದ ದಿನಾಂಕ | 20-12-2025 |
| ತಂದೆಯ ಹೆಸರು | ಶಿವಲಿಂಗಯ್ಯ | | |
| ವಯಸ್ಸು | 31 ವರ್ಷ | | |
| ವೃತ್ತಿ | ಜಲ ಮಂಡಳಿ , ನೌಕರ | ಚಾಸಾ | 2 |
| ವಾಸಸ್ಥಳ | ತಿಪ್ಪೂರು | ಪ್ರಾಸಾ | 2 |

**ಮುಖ್ಯ ವಿಚಾರಣೆ :ಮಾನ್ಯ ಎಪಿಪಿಯವರಿಂದ :-**

ನಾನು ಆರೋಪಿತರನ್ನು ನೋಡಿಲ್ಲ. ಈ ಪ್ರಕರಣದ ಅಪಘಾತ ನೋಡಿಲ್ಲ. ನನಗೆ ಅಪಘಾತದ ವಿಚಾರ ಗೊತ್ತಿಲ್ಲ. ನಾನು ಪೋಲಿಸರಿಗೆ ಯಾವುದೇ ಹೇಳಿಕೆ ನೀಡಿಲ್ಲ. ಸಾಕ್ಷಿಗೆ ಸ್ಥ.ಳ ಮಹಜರ್ ನ್ನು ತೋರಿಸಲಾಗಿ ಅದನ್ನು ನೋಡಿ ಗುರುತಿಸಿದ್ದು ಸ್ಥಳ ಮಹಜರ್ ನ್ನು ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ನಿಪಿ-2 ರ ವಿಚಾರ ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಗಿದೆ)

**ಪಾಟೀ ಸವಾಲು :- ಮಾನ್ಯ ಎಪಿಪಿಯವರಿಂದ :-**

ದಿಃ 10-04-2023 ರಂದು ಬೆಳಗ್ಗೆ 10 ಗಂಟೆ ಸಮಯದಲ್ಲಿ ನಾನು ಮಂಡ್ಯ ಸಿಟಿ ಯಲ್ಲಿ ಮಾನಸ ಮೆಡಿಕಲ್ ಸ್ಟೋರ್ ಬಳಿ ನಿಂತಿದ್ದಾಗ ಚಾಸಾ-1 ರವರ ತಂದೆ ಕೃಷ್ಣ

ಮೋಟಾರ್ ಬೈಕ್ ನಂಬರ್ ಕೆಎ-41-ಕೆ-463 ರಲ್ಲಿ ಫ್ಯಾಕ್ಟರಿ ಸರ್ಕಲ್ ಗೆ ಕಡೆಗೆ ಹೋಗುತ್ತಿದ್ದರು ಎಂದರೆ ಸರಿಯಲ್ಲ ಮತ್ತು ಅದೇ ವೇಳೆಯಲ್ಲಿ ಕೃಷ್ಣರವರ ಹಿಂದಿನಿಂದ ಬಂದ ಕಾರ್ ನಂಬರ್ ಕೆಎ-41-ಜೆಡ್ -5982 ರ ವ್ಯಾಗ್ನಾರ್ ಕಾರಿನ ಚಾಲಕ ತನ್ನ ಕಾರನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಲಾಯಿಸಿಕೊಂಡು ಬಂದು ಡಿಕ್ಕಿ ಪಡಿಸಿರುತ್ತಾರೆ ಎಂದರೆ ಸರಿಯಲ್ಲ. ನಂತರ ಕೃಷ್ಣ ಎರಡು ಕೈಗಳಿಗೆ, ಕಾಲುಗಳಿಗೆ, ತಲೆಗೆ ಮತ್ತು ಬೆನ್ನಿಗೆ ಪೆಟ್ಟಾಗಿತ್ತು ಎಂದರೆ ಸರಿಯಲ್ಲ. ನಂತರ ಅವರನ್ನು ನಾನು ಆಸ್ಪತ್ರೆಗೆ ದಾಖಲು ಮಾಡಿರುತ್ತೇನೆಂದರೆ ಸರಿಯಲ್ಲ. ನಂತರ ಚಾಸಾ-1 ರವರಿಗೆ ವಿಚಾರ ತಿಳಿಸಿರುತ್ತೇನೆಂದರೆ ಸರಿಯಲ್ಲ. ನಂತರ ಅಪಘಾತವಾದ ಸ್ಥಳವನ್ನು ದಿಃ 12-04-2023 ರಂದು ನಾನು ತೋರಿಸಿದ ಸ್ಥಳದಲ್ಲಿ ಚಾಸಾ-3 ಮತ್ತು 4 ರವರ ಸಮಕ್ಷಮ ಮಧ್ಯಾಹ್ಣ 2-30 ರಿಂದ 3-15 ರವರಗೆ ನಿಪಿ-2 ರಂತೆ ಪಂಚನಾಮೆ ಮಾಡಿರುತ್ತಾರೆಂದರೆ ಸರಿಯಲ್ಲ.

2. ನಂತರ ನಾನು ಈ ಬಗ್ಗೆ ಸ್ಥಳದಲ್ಲಿ ಹಾಜರು ಇದ್ದು ಸಹಿ ಮಾಡಿರುತ್ತೇನೆಂದರೆ ಸರಿಯಲ್ಲ. ನಿಪಿ-2 ರ ವಿಚಾರ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲೆಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಅದದೇ ರೀತಿ ಮೇಲೆ ಓದಿ ಹೇಳಿದಂತೆ ದಿಃ 12-04-2023 ರಂದು ಪೋಲಿಸರಿಗೆ ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗೆರಳೆದ ಕಾರಣ ಸದರಿ ಹೇಳಿಕೆಯನ್ನು ನಿಪಿ-3 ಎಂದು ದಿಃ 14-04-2023 ರಂದು ಪೋಲಿಸ್ ಠಾಣೆಗೆ ಹಾಜರಾಗಿ ನ್ಯಾಯಾಲಯದ ಮುಂದೆ ಆರೋಪಿಯನ್ನು ಗುರುತಿಸಿರುತ್ತೇನೆಂದರೆ ಸರಿಯಲ್ಲ ರಈ ವಿಚಾರವನ್ನು ಪೋಲಿಸರಿಗೆ ಹೇಳಿಕೆ ಕೊಟ್ಟಿರುತ್ತೇನೆಂದರೆ ಸರಿಯಲ. ಸಾಕ್ಷಿಯು ಅಲ್ಲಗೆಳೆದ ಕಾರಣ ಸದರಿ ಹೇಳಿಕೆಯನ್ನು ನಿಪಿ-4 ಎಂದು ಗುರುತಿಸಲಾಯಿತು. ನಿಪಿ2 ರಿಂದ 4 ರ ವಿಚಾರ ಗೊತ್ತಿದ್ದರುಾ ಸಹ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲು:- ಆರೋಪಿ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ನುಡಿದಿರುತ್ತಾರೆ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

(ಶ್ರೀ. ಶಿವಕುಮಾರ ಜಿ.ಜೆ)
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ಮಂಡ್ಯ.